(ಇಂದು ದಿನಾಂಕ 22.10.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಂದುವರೆದ ವಾಟೀ ಸವಾಲು:- ಪ್ರತಿವಾದಿ 6, 7 ಮತ್ತು 10 ರವರ ಪರವಾಗಿ:-**

ಈಗ ನನಗೆ ತೋರಿಸುತ್ತಿರುವ ದಾಖಲೆ ನಮ್ಮ ಗ್ರಾಮದಲ್ಲಿ ಇರುವ ಮನೆಯ ದಾಖಲೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ. ನನ್ನ ತಂದೆಯ ಹೆಸರಿನಲ್ಲಿ ಇರುವ ಮನೆಯನ್ನು ದಾವೆಯಲ್ಲಿ ಸೇರಿಸಿದ್ದೆವೋ ಇಲ್ಲವೋ ನನಗೆ ಗೊತ್ತಿಲ್ಲ. ನನ್ನ ತಂದೆ ದಾವಾ ಆಸ್ತಿಯನ್ನು ನಮ್ಮ ಕುಟುಂಬದ ವ್ಯವಹಾರಕ್ಕೆ ಹಾಗೂ ನಮ್ಮಗಳ ಮದುವೆ ಮಾಡಿಸಲು ಮಾರಾಟ ಮಾಡಿದ್ದರು ಎಂದರೆ ಸರಿಯಲ್ಲ. ಪ್ರತಿವಾದಿ 6 ಮತ್ತು 7 ರವರಿಗೆ ಮಾರಾಟ ಮಾಡಿರುವ ಆಸ್ತಿಯ ಮೇಲೆ ಮಾತ್ರ ದಾವೆ ಹೂಡಿದ್ದೀರಾ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ನನ್ನ ತಂದೆಗೆ ದಾವಾ ಆಸ್ತಿ ಬಿಟ್ಟು ಬೇರೆ ಆಸ್ತಿಗಳು ಇದ್ದರೂ ಅವುಗಳನ್ನು ಈ ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ಹೇಳುತ್ತಾರೆ. ಪ್ರತಿವಾದಿ 6 ಮತ್ತು 7 ರವರು ತಾವು ಖರೀದಿಸಿದ ಆಸ್ತಿಯನ್ನು ದಾನಪತ್ರದ ಮೂಲಕ 10 ನೇ ಪ್ರತಿವಾದಿಗೆ ನೀಡಿದ್ದಾರೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎನ್ನುತ್ತಾರೆ. ಆಸ್ತಿಗಳ ಮೌಲ್ಯ ಹೆಚ್ಚಾದ ಕಾರಣ ಪ್ರತಿವಾದಿ 6, 7 ಮತ್ತು 10 ರವರಿಗೆ ತೊಂದರೆ ನೀಡಲು ಈ ದಾವೆ ಹೂಡಿದ್ದೇನೆ ಎಂದರೆ ಸರಿಯಲ್ಲ. ಮಾರಾಟ ಮಾಡಿ 15 ವರ್ಷಗಳ ನಂತರ ಸುಳ್ಳು ದಾವೆ ಹೂಡಿದ್ದೇವೆ ಎಂದರೆ ಸರಿಯಲ್ಲ.

**ಮರುವಿಚಾರಣೆ:- ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)**

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಅಪರ ಹಿರಿಯ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ,
ಆನೇಕಲ್.